ಆ) ಹಾಗಿದ್ದಲ್ಲಿ, ನಂದಿದುರ್ಗ ಮತ್ತು ಕೆಂಚಟ್ಟನಹಳ್ಳಿ 2 ನೇ ಹಂತದ ಹೊಸ ಏತ ನೀರಾವರಿ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ಸಂಪೂರ್ಣ ಮಾಹಿತಿ ನೀಡುವುದು);

ಶ್ರೀ ಶಿವರಾಜ್ ಎಸ್. ತಂಗಡಗಿ (ಮಾನ್ಯ ಸಣ್ಣ ನೀರಾವರಿ ಸಚಿವರು)

ಅ) ಇಲ್ಲ

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ತುಂಗಭದ್ರಾ ಜಲಾಶಯದಿಂದ ನೀರನ್ನು ಒದಗಿಸುವುದು:

1050 (937); ಶ್ರೀ ಎಸ್. ಭೀಮಾನಾಯ್ಕ (ಹಗರಿಬೊಮ್ಮನಹಳ್ಳಿ)

ಅ) ಹಗರಿಬೊಮ್ಮನಹಳ್ಳಿ ತಾಲ್ಲೂಕಿನ ಮಾಲವಿ ಜಲಾಶಯಕ್ಕೆ ತುಂಗಭದ್ರಾ ಜಲಾಶಯದಿಂದ ನೀರನ್ನು ಒದಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಈ ಪ್ರಸ್ತಾವನೆಗೆ ತುಂಗಭದ್ರಾ ಮಂಡಳಿಯು ಅನುಮೋದನೆ ನೀಡಿದೆಯೇ;

ಇ) ಹಾಗಿದ್ದಲ್ಲಿ, ಡೆಂಟಲ್ ಪ್ರಾಜೆಕ್ಟ್ ರೀಪೋರ್ಟ್‌ನ್ನು ಕರ್ನಾಟಕ ನೀರಾವರಿ ನಿಗಮ ನಿಯಮಿತ ಮಂಡಳಿಯಿಂದ ಅನುಮೋದನೆ ಪಡೆದ ಪ್ರಸ್ತಾವನೆಯನ್ನು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಈಗಾಗಲೇ ಸರ್ಕಾರ ಅನುಮೋದನೆ ನೀಡಿದ್ದಲ್ಲಿ, ಯಾವಾಗ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು (ಸಂಪೂರ್ಣ ಮಾಹಿತಿ ನೀಡುವುದು)?

ಶ್ರೀ ಎಂ. ಬಿ. ಪಾಟೀಲ್ (ಮಾನ್ಯ ಜಲಸಂಪನ್ಮೂಲ ಸಚಿವರು)

ಅ) ಪರಿಶೀಲನೆಯಲ್ಲಿದೆ.

ಆ) ಅನುಮೋದನೆ ನೀಡಿರುವುದಿಲ್ಲ.

ಇ) ಮತ್ತು (ಈ) ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲ್ಲೂಕು ಮಾಲವಿ ಜಲಾಶಯಕ್ಕೆ ತುಂಗಭದ್ರಾ ಜಲಾಶಯದಿಂದ ನೀರನ್ನು ಒದಗಿಸುವ ಪ್ರಸ್ತಾವನೆಯನ್ನು ಸದ್ಯ ಕರ್ನಾಟಕ ನೀರಾವರಿ ನಿಗಮಕ್ಕೆ ಹಸ್ತಾಂತರಿಸಿದ್ದು, ಯೋಜನೆಗೆ ಅವಶ್ಯವಿರುವ ನೀರಿನ ಲಭ್ಯತೆ / ಹಂಚಿಕೆ ಬಗ್ಗೆ ಪರಿಶೀಲಿಸಿ, ವಿವರವಾದ ಯೋಜನಾ ವರದಿಯನ್ನು ತಯಾರಿಸಲು ಕ್ರಮ ಕೈಗೊಳ್ಳಲಾಗುವುದು.

ಗ್ರಾಮ ಅರಣ್ಯ ಸಮಿತಿಗಳ ರಚನೆ ಹಾಗೂ ಪುನಶ್ಚೇತನ

1051. (1730); ಶ್ರೀ ಚಲುವರಾಯಸ್ವಾಮಿ ಎನ್. (ನಾಗಮಂಗಲ)

ಅ) ರಾಜ್ಯದಲ್ಲಿ ಗ್ರಾಮ ಅರಣ್ಯ ಸಮಿತಿಗಳನ್ನು ರಚಿಸಲಾಗಿದೆಯೇ, ಹಾಗಿದ್ದಲ್ಲಿ, ಜಿಲ್ಲಾವಾರು ವಿವರ ನೀಡುವುದು;

ಆ) ಗ್ರಾಮ ಅರಣ್ಯ ಸಮಿತಿಗಳ ರಚನೆಗೆ ನಿಗದಿಪಡಿಸಿರುವ ಮಾನದಂಡಗಳೇನು; ಈ ಸಮಿತಿಗಳ ಕರ್ತವ್ಯ ಜವಾಬ್ದಾರಿ, ಅಧಿಕಾರಗಳೇನು; (ವಿವರ ನೀಡುವುದು)

ಇ) 2013–14ನೇ ಸಾಲಿನಿಂದ ಗ್ರಾಮ ಅರಣ್ಯ ಸಮಿತಿಗಳ ಪುನಃಶ್ಚೇತನಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪೂರ್ಣ ವಿವರ ಒದಗಿಸುವುದು);

ಈ) ಗ್ರಾಮ ಅರಣ್ಯ ಸಮಿತಿಗಳ ರಚನೆಯ ಉದ್ದೇಶ ಈಡೇರಿದೆಯೇ; ಬಗ್ಗೆ ಯಾವುದಾದರೂ ಮೌಲ್ಯ ಮಾಪನ ಮಾಡಲಾಗಿದೆಯೇ?

ಶ್ರೀ ಬಿ. ರಮಾನಾಥ ರೈ (ಪೌರಾಡಳಿತ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ರಾಜ್ಯದಲ್ಲಿ ಗ್ರಾಮ ಅರಣ್ಯ ಸಮಿತಿಗಳನ್ನು ರಚಿಸಲಾಗಿದ್ದು, ಜಿಲ್ಲಾವಾರು ವಿವರಗಳನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.